# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1118 (1450) |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ ಎಸ್ ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 30/12/2022 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಸಂಘಟಿತ ವಲಯದಲ್ಲಿರುವ ನೋಂದಾಯಿತ ಕಾರ್ಮಿಕರ ಸಂಖ್ಯೆ ಎಷ್ಟು; ಅದರಲ್ಲಿ ರಾಜ್ಯದಿಂದ ಹಾಗೂ ಹೊರ ರಾಜ್ಯದಿಂದ ಬಂದ ಕಾರ್ಮಿಕರ ಸಂಖ್ಯೆ ಎಷ್ಟು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ನೋಂದಾಯಿತ ಕಾರ್ಮಿಕರುಗಳ ವಿವರಗಳು ಈ ಕೆಳಕಂಡಂತಿದೆ.<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br><br>ಈ ಮಂಡಳಿಯ ಫಲಾನುಭವಿಗಳಾಗಿ ಅಸಂಘಟಿತ ವಲಯಕ್ಕೆ ಸೇರಿದ 30.43 ಲಕ್ಷ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ನೋಂದಣಿಯಾಗಿರುತ್ತಾರೆ.<br>ಸೇವಾ ಸಿಂಧು ತಂತ್ರಾಂಶದಲ್ಲಿ ರಾಜ್ಯದಿಂದ ಹಾಗೂ ಹೊರ ರಾಜ್ಯದಿಂದ ಬರುವ ಕಾರ್ಮಿಕರ ನೋಂದಣಿ ಕುರಿತು ಮಾಹಿತಿಯನ್ನು ಪ್ರತ್ಯೇಕವಾಗಿ ನಿರ್ವಹಿಸಿರುವುದಿಲ್ಲ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**<br><br>ಈ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳು/ ಕಾರ್ಯಕ್ರಮಗಳಡಿ ನೋಂದಣಿಯಾದ ಅಸಂಘಟಿತ ಕಾರ್ಮಿಕರ ಸಂಖ್ಯೆಯ ವಿವರ ಈ ಕೆಳಕಂಡಂತಿದೆ. |

| ಕ್ರ ಸಂ. | ಯೋಜನೆ/ ಕಾರ್ಯಕ್ರಮ | ನೋಂದಾಯಿತ ಕಾರ್ಮಿಕರ ಸಂಖ್ಯೆ |
|---|---|---|
| 01 | ಅಂಬೇಡ್ಕರ್ ಕಾರ್ಮಿಕರ ಸಹಾಯ ಹಸ್ತ ಯೋಜನೆ (11ವರ್ಗಗಳ ಅಸಂಘಟಿತ ಕಾರ್ಮಿಕರಾದ "ಹಮಾಲರು, ಗೃಹ ಕಾರ್ಮಿಕರು, ಟೈಲರ್ಸ್, ಚಿಂದಿ ಆಯುವವರು, ಮೆಕ್ಯಾನಿಕ್ಸ್, ಅಗಸರು, ಕ್ಷೌರಿಕರು, ಅಕ್ಕಸಾಲಿಗರು, ಕಮ್ಮಾರರು, | 2,72,152 |

| | | |
|---|---|---|
| | ಕುಂಬಾರರು ಹಾಗೂ ಭಟ್ಟಿಕಾರ್ಮಿಕ) | |
| 02 | ಕೋವಿಡ್–19ರ ವಿಶೇಷ ಪ್ಯಾಕೇಜ್ ಅಡಿ ಒಂದು ಬಾರಿ ಪರಿಹಾರಕೋರಿ ಅರ್ಜಿ ಸಲ್ಲಿಸಿದ ಕಾರ್ಮಿಕರ ಸಂಖ್ಯೆ | 12,21,755 |
| 03 | ಕೇಂದ್ರ ಸರ್ಕಾರದ ಇ-ಶ್ರಮ್ ಪೋರ್ಟಲ್ ನಲ್ಲಿಅಸಂಘಟಿತ ಕಾರ್ಮಿಕರ ನೋಂದಣಿ | 72,95,670 |
| | ಒಟ್ಟು | 87,89,577 |

ಮೇಲ್ಕಂಡ ಯೋಜನೆ/ ಕಾರ್ಯಕ್ರಮದಡಿ ನೋಂದಾಯಿತ ಎಲ್ಲಾ ಕಾರ್ಮಿಕರು ಕರ್ನಾಟಕ ರಾಜ್ಯದವರಾಗಿರುತ್ತಾರೆ.

ಆ) ಕಾರ್ಮಿಕ ಇಲಾಖೆ ವತಿಯಿಂದ ಅಸಂಘಟಿತ ಕಾರ್ಮಿಕರಿಗಾಗಿ ನಿವೇಶನಗಳನ್ನು ಅಥವಾ ವಿಶೇಷವಾಗಿ ಮನೆಗಳನ್ನು ಒದಗಿಸುವ ಯೋಜನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**

ಅಸಂಘಟಿತ ವಲಯಕ್ಕೆ ಸೇರಿದ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರಿಗೆ ನಿವೇಶನಗಳನ್ನು ಅಥವಾ ವಿಶೇಷವಾಗಿ ಮನೆಗಳನ್ನು ಒದಗಿಸುವ ಯೋಜನೆ ಮಂಡಳಿಯಲ್ಲಿ ಇರುವುದಿಲ್ಲ.

ಆದರೆ, ನೋಂದಾಯಿತ ಫಲಾನುಭವಿಗಳಿಗೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮಗಳು, 2006 ರ ನಿಯಮ, 42 ರ ಗೃಹ ಭಾಗ್ಯ ಸೌಲಭ್ಯದಡಿ ರೂ.2.00 ಲಕ್ಷಗಳ ವರೆಗೆ ಮುಂಗಡ / ಸಾಲ ನೀಡಲು ಪ್ರಾವಧಾನಗಳಿದ್ದು,- ಅದರನ್ವಯ ಮಂಡಳಿಯ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ವಸತಿ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಸಂಗ್ರಹವಾದ ಸುಂಕ ನಿಧಿಯಿಂದ ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿ ಹಾಗೂ ರಾಜೀವ್‌ಗಾಂಧಿ ವಸತಿ ನಿಗಮಕ್ಕೆ ಹಣ ಬಿಡುಗಡೆ ಮಾಡಲಾಗಿದೆ. ವಿವರ ಈ ಕೆಳಕಂಡಂತಿದೆ:–

| ಕ್ರ.ಸಂ | ನಿಗಮ/ ಮಂಡಳಿ | ಬಿಡುಗಡೆ ಮಾಡಲಾದ ಮೊತ್ತ (ರೂ.ಕೋಟಿಗಳಲ್ಲಿ) |
|---|---|---|
| 1 | ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿ | 509.70 |
| 2 | ರಾಜೀವ್‌ಗಾಂಧಿ ವಸತಿ ನಿಗಮ | 8.74 |
| 3 | ಸಹಾಯಕ ಕಾರ್ಮಿಕ ಆಯುಕ್ತರು, ಮಂಗಳೂರು | 4.31 |

| | | |
|---|---|---|
| | | ಮುಂದುವರೆದು, ವಲಸೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಅವರು ಕೆಲಸ ನಿರ್ವಹಿಸುವ ಸ್ಥಳದಲ್ಲಿ ವಾಸಿಸಲು ಅನುಕೂಲವಾಗುವಂತೆ ದೊಡ್ಡಬಳ್ಳಾಪುರ ಜಿಲ್ಲೆಯ ಓಬದೇವನಹಳ್ಳಿಯ ಕೈಗಾರಿಕ ಪ್ರದೇಶ, ಶಿವಮೊಗ್ಗ ಜಿಲ್ಲೆಯ ದೇವಕಾತಿಕೊಪ್ಪ ಕೈಗಾರಿಕ ಪ್ರದೇಶ ಮತ್ತು ಬೆಳಗಾವಿಯ ಬಿ.ಕೆ ಕಂಗ್ರಾಳಿಯ ಕೈಗಾರಿಕ ಪ್ರದೇಶದಲ್ಲಿ ತಾತ್ಕಾಲಿಕ ವಸತಿ ಗೃಹಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಕಾಇ 748 ಎಲ್‌ಇಟಿ 2022

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು